# ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

**ಸಹಾಯಕ ಅಭಿಯಂತರರ ಕಛೇರಿ, ವಾರ್ಡ್ ಸಂಖ್ಯೆ 69 ಮನೋರಾಯನಪಾಳ್ಯ**

ಸಂಖ್ಯೆ: ಸ.ಅ/ವಾ-69/ಪಿ.ಆರ್/04/2022-23 ದಿನಾಂಕ:- 03-12-2022

**ವಾರ್ಡ್ ಸಮಿತಿ ಸಭೆಯ ನಡವಳಿಗಳು**

**ವಿಷಯ:** ಮಾನ್ಯ ಆಯುಕ್ತರು ಬಿ.ಬಿ.ಎಂ.ಪಿ ರವರ ಆದೇಶ ಸಂಖ್ಯೆ:ಬಿ12(5)ಪಿ.ಆರ್/35/2020-21 ದಿನಾಂಕ: 21-09-2020. ರವರ ಆದೇಶದಂತೆ ದಿನಾಂಕ:-03-12-2022 ರಂದು ವಾರ್ಡ್ ನಂ:69 ಮನೋರಾಯನಪಾಳ್ಯ ವಾರ್ಡ್ ಸಮಿತಿ ಸಭೆಯ ನಡವಳಿಗಳು.

**:: ಸಭೆಗೆ ಹಾಜರಾಗಿದ್ದವರ ವಿವರಗಳು ::**

| ಕ್ರ.ಸಂ | ಹೆಸರು ಶ್ರೀಮತಿ/ಶ್ರೀ | ಪದನಾಮ |
|---|---|---|
| 1. | ಶ್ರೀ. ಅಶೋಕ್ ಹಿಂದಾ | ವಾರ್ಡ್ ಸಮಿತಿ ಅಧ್ಯಕ್ಷರು ಮತ್ತು ನೋಡಲ್ ಅಧಿಕಾರಿಗಳು |
| 2. | ಶ್ರೀ. ಸೋಮಶೇಖರ್ ನಿಟ್ಟೂರೆ | ಸಹಾಯಕ ಅಭಿಯಂತರರು ವಾರ್ಡ್ ನಂ: 69 |
| 3. | ಶ್ರೀಮತಿ ಉಷಾರಾಣಿ | ಹಿರಿಯ ಆರೋಗ್ಯ ಪರಿವೀಕ್ಷಕರು |
| 4. | ಶ್ರೀ. ಕೇತನ್ | ಅಸೆಸರ್, ಕಂದಾಯ ಇಲಾಖೆ |
| 5. | ಶ್ರೀ.ಶೇಖ್ ನಜರುದ್ದೀನ್ | ಬಿ.ಬಿ.ಎಂ.ಪಿ ಮಾರ್ಷಲ್ |
| 6. | ಶ್ರೀ. ಮುಕೇಶ್ | ಸಾರ್ವಜನಿಕರು |
| 7. | ಶ್ರೀ. ನರಸಿಂಹ | ಸಾರ್ವಜನಿಕರು |
| 8. | ಶ್ರೀ.ಎಂ.ಖಾಜಾ ಮೈನೋದ್ದೀನ್ | ಸಾರ್ವಜನಿಕರು |
| 9. | ಶ್ರೀ. ಶೇಖ್ ಅಂಜುಂ | ಸಾರ್ವಜನಿಕರು |
| 10. | ಶ್ರೀ. ವನೀತ್ ಕುಮಾರ್ | ಸಾರ್ವಜನಿಕರು |

ವಾರ್ಡ್ ಸಮಿತಿಯ ಅಧ್ಯಕ್ಷರು ಹಾಗೂ ನೋಡೆಲ್ ಅಧಿಕಾರಿಯಾದ ಶ್ರೀ. ಅಶೋಕ್ ಹಿಂದಾ ಮತ್ತು ಕಾರ್ಯದರ್ಶಿ, ಸಹಾಯಕ ಅಭಿಯಂತರರಾದ ಶ್ರೀ.ಸೊಮಶೇಖರ್ ನಿಟ್ಟೂರೆ ರವರು ಸಭೆಗೆ ಹಾಜರಾಗಿದ್ದ ಎಲ್ಲರಿಗೂ ಸ್ವಾಗತ ಕೋರಿ ಸಭೆಯನ್ನು ಪ್ರಾರಂಭಿಸಲಾಯಿತು. ಹಾಗೂ ಅಧ್ಯಕ್ಷರಿಗೆ ವಾರ್ಡ್ ಸಭೆ ಸಾರ್ವಜನಿಕ ಕುಂದು ಕೊರತೆಗಳ ಬಗ್ಗೆ ವಿಸ್ತಾರವಾಗಿ ಪ್ರಸ್ತಾಪಿಸಲು ಕೋರಲಾಯಿತು.

ಅಧ್ಯಕ್ಷರು ಹಾಗೂ ನೋಡಲ್ ಅಧಿಕಾರಿಗಳು ವಾರ್ಡ್ ಸಂಖ್ಯೆ-69 ರವರು ಹಿಂದಿನ ಸಭೆಯಲ್ಲಿ ನಡೆದಂತಹ ವಿಷಯಗಳ ಹಾಗೂ ದೂರುಗಳ ಕುರಿತು ತೆಗೆದುಕೊಂಡಿರುವ ಕ್ರಮಗಳ ಬಗ್ಗೆ ಕೂಲಂಕುಶವಾಗಿ ಚರ್ಚಿಸಲಾಯಿತು.

**ಘನತ್ಯಾಜ್ಯ:-**

1. ವಾರ್ಡ್ ವ್ಯಾಪ್ತಿಯಲ್ಲಿನ ಪ್ರತಿ ಮನೆ ಮನೆಗೆ ಹೋಗಿ ಒಣ ಮತ್ತು ಹಸಿ ತ್ಯಾಜ್ಯವನ್ನು ಸಂಗ್ರಹಿಸಲಾಗುತ್ತಿರುತ್ತದೆ.

**ಕಾಮಗಾರಿ ಇಲಾಖೆ:**

1. ಸುಲ್ತಾನ್ ಪಾಳ್ಯ ಮುಖ್ಯರಸ್ತೆಯಲ್ಲಿ Intensive Cleaning ಕಾಮಗಾರಿಯು ಪ್ರಗತಿಯಲ್ಲಿರುತ್ತದೆ.

**ಆರೋಗ್ಯ ಇಲಾಖೆ:-**

1. ವಾರ್ಡ್ ವ್ಯಾಪ್ತಿಯ ಸೀತಪ್ಪ ಬಡಾವಣೆಯಲ್ಲಿ ಸೊಳ್ಳೆ ನಿರೋದಕ ಔಷಧಿಯನ್ನು ಸಿಂಪಡಣೆ ಮಾಡಲಾಗಿದೆ.

**ಬಿ.ಡಬ್ಲ್ಯೂ.ಎಸ್.ಎಸ್.ಬಿ:-**

1. ವಾರ್ಡ್ ವ್ಯಾಪ್ತಿಯಲ್ಲಿ ಪ್ರತಿ ದಿನ ಸಮಯಕ್ಕೆ ಸರಿಯಾಗಿ ನೀರು ಸರಬರಾಜು ಮಾಡಲಾಗುತ್ತಿದೆ.

## ದಿನಾಂಕ:-03-12-2022 ರಂದು ನಡೆದ ವಾರ್ಡ್ ಸಮಿತಿ ಸಭೆಯಲ್ಲಿ ಚರ್ಚಿಸಲಾದ ವಿಷಯಗಳು

**ಬೀದಿ ದೀಪ:-**

1. ಭುವನೇಶ್ವರಿ ನಗರದಲ್ಲಿ ಕೆಲವು ಬೀದಿ ದೀಪಗಳು ಕೆಟ್ಟು ಹೋಗಿದ್ದು, ಅವುಗಳನ್ನು ಸರಿಪಡುವಂತೆ ಬೀದಿ ದೀಪಗಳ ನಿರ್ವಹಣೆಯ ಗುತ್ತಿಗೆದಾರರಿಗೆ ಸೂಚಿಸಲಾಯಿತು.

**ಕಾಮಗಾರಿ ಇಲಾಖೆ:**

1. ಮನೋರಾಯನಪಾಳ್ಯ ಬಡಾವಣೆಯಲ್ಲಿ ರಸ್ತೆಯ ಮೇಲೆ ಹರಿಯುವ ನೀರನ್ನು ರಸ್ತೆ ಪಕ್ಕದ ಚರಂಡಿಗಳಿಗೆ ಸರಾಗವಾಗಿ ಹರಿಯುವಂತೆ ಕ್ರಮಕೈಗೊಳ್ಳಲು ಸೂಚಿಸಲಾಯಿತು.

**ಆರೋಗ್ಯ ಇಲಾಖೆ:**

1. ವಾರ್ಡ್ ವ್ಯಾಪ್ತಿಯಲ್ಲಿ ಬ್ಲಾಕ್ ಸ್ಪಾಟ್ ಸ್ಥಳಗಳಲ್ಲಿ ಕಸವನ್ನು ಸುರಿಯುತ್ತಿರುವವರ ವಿರುದ್ಧ ಕ್ರಮ ಕೈಗೊಂಡು ದಂಡ ವಿಧಿಸಲು ಬಿ.ಬಿ.ಎಂ.ಪಿ ಮಾರ್ಷಲ್ ರವರಿಗೆ ಸೂಚಿಸಲಾಯಿತು.

ಮೇಲಿನ ಎಲ್ಲಾ ಅಂಶಗಳಿಗೆ ಸಂಬಂಧಪಟ್ಟಂತೆ ಅಧಿಕಾರಿಗಳೊಂದಿಗೆ ಕೂಲಂಕುಶವಾಗಿ ಚರ್ಚಿಸಿ ಸದರಿ ವಿಷಯಗಳ ಬಗ್ಗೆ ಕ್ರಮ ಕೈಗೊಳ್ಳಲು ತೀರ್ಮಾನಿಸಿ ವಂದನೆಗಳೊಂದಿಗೆ ಈ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

ಕಾರ್ಯದರ್ಶಿಗಳು
ಹಾಗೂ ಸಹಾಯಕ ಅಭಿಯಂತರರು
ವಾರ್ಡ್ ನಂ: 69 ಮನೋರಾಯನಪಾಳ್ಯ

ಅಧ್ಯಕ್ಷರು
ಹಾಗೂ ನೋಡಲ್ ಅಧಿಕಾರಿಗಳು
ವಾರ್ಡ್ ನಂ: 69 ಮನೋರಾಯನಪಾಳ್ಯ

ಪ್ರತಿಯನ್ನು:

1. ಕೌನ್ಸಿಲ್ ಕಾರ್ಯದರ್ಶಿ, ಬಿಬಿಎಂಪಿ ಕೇಂದ್ರ ಕಛೇರಿ, ರವರ ಅವಗಾಹನೆಗಾಗಿ ಸಲ್ಲಿಸಿದೆ.
2. ಮಾನ್ಯ ಜಂಟಿ/ಅಪರ ಆಯುಕ್ತರು (ಪೂರ್ವ) ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
3. ಮಾನ್ಯ ಜಂಟಿ ಆಯುಕ್ತರು (ಆರೋಗ್ಯ/ಎಸ್‌ಡಬ್ಲ್ಯೂಎಂ) ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
4. ಉಪ ಆಯುಕ್ತರು (ಪೂರ್ವ), ಬಿಬಿಎಂಪಿ ರವರ ಅವಗಾಹನೆಗೆ ತರಲು ಆಪ್ತ ಶಾಖೆಗೆ ಕಳುಹಿಸಿದೆ
5. ಕಛೇರಿ ಕಡತಕ್ಕೆ.